ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಖಾಸಗಿ ಶಾಲಾ ಶಿಕ್ಷಕರ ಬಗ್ಗೆ

ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

856 (846) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಖಾಸಗಿ ಶಾಲೆಗಳ ಸುಮಾರು ನಲವತ್ತು ಸಾವಿರಕ್ಕೂ ಅಧಿಕ ಶಿಕ್ಷಕರು ತಮ್ಮ ಉದ್ಯೋಗ ಕಳೆದುಕೊಂಡು ಬೀದಿ ಪಾಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇವರ ಜೀವನೋಪಾಯಕ್ಕೆ ಸರ್ಕಾರ ನೀಡಿದ ಪರಿಹಾರವೇನು; ಹಾಗೂ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ರಾಜ್ಯದ ಸಾವಿರಾರು ಖಾಸಗಿ ಶಾಲಾ ಶಿಕ್ಷಕರು ಈಗ ದಿನಗೂಲಿ ಕಾರ್ಮಿಕರಾಗಿ ಜೀವನ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇವರಿಗೆ ಕಲ್ಪಿಸಲಾದ ಪರ್ಯಾಯ ವ್ಯವಸ್ಥೆ ಏನು ;

(ಇ) ಸರ್ಕಾರ ಡಿಜಿಟಲ್ ಇಂಡಿಯಾ ಮೂಲಕ ಶಿಕ್ಷಕರಿಗೆ ಕಂಪ್ಯೂಟರ್ ಸೇರಿದಂತೆ ಅಗತ್ಯ ತಾಂತ್ರಿಕ ಮೂಲ ಸೌಕರ್ಯಗಳನ್ನು ಒದಗಿಸಲು ಸಾಧ್ಯವಾಗದಿರುವಾಗ ಅವರಿಗೆ ಆನ್‌ಲೈನ್ ತರಗತಿಗಳನ್ನು ನಡೆಸಲು ಕೇಂದ್ರವು ಒತ್ತಾಯ ಹೇರುತ್ತಿರುವುದು ಸರಿಯೇ ;

(ಈ) ಬೆಂಗಳೂರಿನ 11 ಸಾವಿರ ಶಾಲಾ ಬಸ್‌ಗಳು ಸೇರಿದಂತೆ ರಾಜ್ಯದಿಂದ ಸುಮಾರು 15 ಸಾವಿರ ಶಾಲಾ ಬಸ್‌ಗಳು ನಿಂತಲ್ಲೇ ನಿಂತಿದ್ದು, ನಿರುದ್ಯೋಗಿಗಳಾಗಿರುª À ಶಾಲಾ ಬಸ್ ಚಾಲಕರಿಗೆ ಯಾವ ಪರಿಹಾರ ನೀಡಲಾಗಿದೆ ?